**APRIL 02, 2026**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

**<><><>**

**ಮುಖ್ಯಾಂಶಗಳು:**

- **ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಮುಂದುವರಿದ ಪ್ರಚಾರ.**

- **ಆಹಾರ, ಜ್ಞಾನ ಮತ್ತು ಮೌಲ್ಯಗಳನ್ನು ನೀಡುವ ಮೂಲಕ ಆಧ್ಯಾತ್ಮಿಕ ಸಾಧನೆ ಮಾಡಿದವರು ಡಾ.ಶ್ರೀ.ಶಿವಕುಮಾರ ಸ್ವಾಮೀಜಿ – ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್.**

- **ಮಕ್ಕಳಲ್ಲಿ ಕಾಣೆಯಾಗುತ್ತಿರುವ ನೈಜ ಚಟುವಟಿಕೆ ಮತ್ತು ಕೌಶಲಗಳನ್ನು ಉಳಿಸಿಕೊಳ್ಳಲು ಸರ್ಕಾರದಿಂದ ‘ಡಿಜಿಟಲ್ ಕರಡು ನೀತಿ’.**

- **ಇಂದು ಹನುಮ ಜಯಂತಿ ಹಾಗೂ ಪೊಲೀಸ್ ಧ್ವಜ ದಿನಾಚರಣೆ.**

**ವಾರ್ತೆಗಳ ವಿವರ...**

<><><>

**ರಾಜ್ಯದ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭೆಯ ಉಪ ಚುನಾವಣೆ** ಇದೇ 9ರಂದು ನಡೆಯಲಿದ್ದು, ಕಾಂಗ್ರೆಸ್ ಮತ್ತು ಬಿಜೆಪಿಯ ಪ್ರಮುಖ ನಾಯಕರುಗಳು ತಮ್ಮ ತಮ್ಮ ಅಭ್ಯರ್ಥಿಗಳ ಪ್ರಚಾರದಲ್ಲಿ ನಿರತರಾಗಿದ್ದಾರೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ

ಉಪಚುನಾವಣೆಯಲ್ಲಿ ಕಣಕ್ಕಿಳಿದಿರುವ ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ಪ್ರಚಾರ ನಡೆಸಿದರು. ಈ ವೇಳೆ ಸಿದ್ದರಾಮಯ್ಯ; ರಾಜ್ಯದಲ್ಲಿ 16 ವ ದೊಳಗಿನ ಮಕ್ಕಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣ ಬಳಕೆ ಮಾಡುವುದನ್ನು ನಿ ೇಧಿಸಲಾಗಿದೆ. ಈ ಸಂಬಂಧ ಮುಂಗಡಪತ್ರದಲ್ಲೂ ವಿ ಯ ಪ್ರಸ್ತಾಪಿಸಲಾಗಿದೆ. ಹದಿಹರೆಯದ ಮಕ್ಕಳು ಮೊಬೈಲ್‌ನಲ್ಲಿ ಹೆಚ್ಚು ಕಾಲ ಕಳೆಯುವುದರಿಂದ ಅವರ ಆರೋಗ್ಯದ ಮೇಲಾಗುವ ದು ್ಪರಿಣಾಮವನ್ನು ತಪ್ಪಿಸಲು ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದರು.

<><><>

**ಹದಿನೈದನೇ ಹಣಕಾಸು ಆಯೋಗದ ಶಿಫಾರಸ್ಸುಗಳ ಪ್ರಕಾರ ರಾಜ್ಯಕ್ಕೆ ನೀಡಬೇಕಾದ** ಅನುದಾನವನ್ನು ಕೇಂದ್ರ ಪೂರ್ಣವಾಗಿ ನೀಡಿಲ್ಲ ಎಂದು **ಉಪ ಮುಖ್ಯಮಂತ್ರಿ ಡಿ.ಕೆ.** ಶಿವಕುಮಾರ ಆರೋಪಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಲೆ ಏರಿಕೆಯಿಂದ ಸಾಮಾನ್ಯ ಜನರು ಸಂಕ ್ಟಕ್ಕೆ ಒಳಗಾಗಿದ್ದಾರೆ, ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ಬೆಲೆ ಹೆಚ್ಚಳದಿಂದ ಜನರ ಜೀವನ ವೆಚ್ಚ ಹೆಚ್ಚಾಗಿದೆ ಎಂದು ತಿಳಿಸಿದರು. 'ಅಚ್ಚೇ ದಿನ' ಹಾಗೂ ಪ್ರತಿ ಖಾತೆಗೆ ಹಣ ನೀಡುವ ಭರವಸೆಗಳು ಈಡೇರಿಲ್ಲ ಎಂಬುದನ್ನು ಮತದಾರರು ಪ್ರಶ್ನಿಸಬೇಕಾಗಿದೆ ಎಂದು ಹೇಳಿದರು. ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಹೆಚ್ಚಿನ ಮತಾಂತರದಿಂದ ಗೆಲ್ಲುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ ಅವರು; ವಲಸೆ ಹೋದ ಮತದಾರರನ್ನು ಮರಳಿ ಕರೆತರಲು ಕ್ರಮ ಕೈಗೊಳ್ಳಲಾಗಿದೆ ಎಂದರು.

<><><>

**ದಾವಣಗೆರೆ ಮತ್ತು ಬಾಗಲಕೋಟೆ ಎರಡೂ ಕ್ಷೇತ್ರಗಳ ವಿಧಾನಸಭಾ ಉಪ** ಚುನಾವಣೆಯಲ್ಲಿ ತಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲುವ ವಿಶ್ವಾಸವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಣಕಾಸಿನ ಸಚಿವರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣವನ್ನು ಜನರಿಗೆ ತಿಳಿಸಬೇಕು. ಅಧಿಕಾರಕ್ಕೆ ಬಂದು ಮೂರು ವ ಗಳಾದರೂ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಲ್ಲ. ಹಾಗಾಗಿ ಯುವಜನರು ಬೀದಿಗಿಳಿದು ಹೋರಾಟ ಮಾಡುವ ದುಸ್ಥಿತಿ ಬಂದೊದಗಿದೆ ಎಂದು ಹೇಳಿದರು. ಇದೇ ವೇಳೆ, ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ ಎಂದೂ ಅವರು ಅಭಿಪ್ರಾಯಪಟ್ಟರು.

<><><>

**ಹಸಿದವರಿಗೆ ಆಹಾರ, ಜಿಜ್ಞಾಸುಗಳಿಗೆ ಜ್ಞಾನ ಮತ್ತು ಸಮಾಜಕ್ಕೆ ಮೌಲ್ಯಗಳನ್ನು** ಒದಗಿಸುವುದರಲ್ಲಿ ನಿಜವಾದ ಆಧ್ಯಾತ್ಮಿಕತೆ ಅಡಗಿದೆ ಎಂಬುದನ್ನು ಪ್ರದರ್ಶಿಸಿದವರು ಡಾ.ಶ್ರೀ.ಶಿವಕುಮಾರ ಸ್ವಾಮೀಜಿ ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ತುಮಕೂರಿನ ಸಿದ್ದಗಂಗಾ ಮಠದಲ್ಲಿ ಆಯೋಜಿಸಿದ್ದ 119ನೇ ಜಯಂತ್ಯುತ್ಸವದಲ್ಲಿ ಗೌರವಾನ್ವಿತ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರೊಂದಿಗೆ ಭಾಗವಹಿಸಿ ಮಾತನಾಡಿದರು. 'ಗೌರವಾನ್ವಿತ ರಾಷ್ಟ್ರಪತಿಯವರನ್ನು ಈ ಕಾರ್ಯಕ್ರಮಕ್ಕೆ ಹೃತ್ಪೂರ್ವಕವಾಗಿ ಸ್ವಾಗತಿಸುತ್ತೇನೆ. ಇಲ್ಲಿ ನಿಮ್ಮ ಉಪಸ್ಥಿತಿ ಇರುವುದು ತ್ರಿವಿಧ ದಾಸೋಹಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ಗೌರವವಾಗಿದೆ, ಜೊತೆಗೆ ಭಾರತದ ಆತ್ಮವನ್ನು ರೂಪಿಸಿದ ಮಹಾನ್ ಸಂತ ಸಂಪ್ರದಾಯಕ್ಕೆ ರಾಷ್ಟ್ರದ ಗೌರವವಾಗಿದೆ ಎಂದರು.

<><><>

**ಅನ್ನ–ಅಕ್ಷರ–ಆಶ್ರಯ' ನೀಡಿ** ತ್ರಿವಿಧ ದಾಸೋಹಿಯಾದ ಸಿದ್ಧಗಂಗಾ ಶ್ರೀಗಳು ಸರ್ಕಾರದ ಅನೇಕ ಯೋಜನೆಗಳಿಗೆ ಮಹಾನ್ ಸ್ಪೂರ್ತಿಯಾಗಿದ್ದಾರೆ' ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಸ್ಮರಿಸಿದರು. ತುಮಕೂರಿನಲ್ಲಿ ಶ್ರೀ ಶಿವಕುಮಾರ ಮಹಾಸ್ವಾಮಿಗಳ 119ನೇ ಜಯಂತ್ಯುತ್ಸವದಲ್ಲಿ ನುಡಿ ನಮನ ಸಲ್ಲಿಸುತ್ತಾ, ಕೇಂದ್ರ ಸರ್ಕಾರದಲ್ಲಿ ನಾವಿಂದು ಅನು ್ಠಾನಕ್ಕೆ ತರುತ್ತಿರುವ ಅನೇಕ ಜನಪರ ಯೋಜನೆಗಳಿಗೆ ಈ ಮಠದ ದಾಸೋಹ ತತ್ವವೇ ಸ್ಫೂರ್ತಿಯಾಗಿದೆ ಎಂದು ಹೇಳಿದರು. ನಮ್ಮ ಸರ್ಕಾರದ 'ಅಂತ್ಯೋದಯ' ಕಲ್ಪನೆಗೆ ಸಿದ್ದಗಂಗಾ ಮಠವೇ ದಾರಿದೀಪವಾಗಿದೆ. ಹಸಿದವರಿಗೆ ಅನ್ನ ನೀಡುವ 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ" ಇರಲಿ, ಬಡ ಮಕ್ಕಳಿಗೆ ಶಿಕ್ಷಣದ ಹಕ್ಕು ನೀಡುವ ನೀತಿಗಳಿರಲಿ, ಸರ್ವರಿಗೂ ಸಮಾನ ಅವಕಾಶ ನೀಡುವ ನಮ್ಮ ಧ್ಯೇಯವಿರಲಿ ಎಲ್ಲವೂ ಸಿದ್ಧಗಂಗಾ ಶ್ರೀಗಳು ಹಾಕಿಕೊಟ್ಟ ದಾಸೋಹದ ಬುನಾದಿಯಾಗಿದೆ ಎಂದು ಹೇಳಿದರು. ರಾಜ್ಯದಲ್ಲಿ ಈ ಹಿಂದೆ ಬಸವರಾಜ ಬೊಮ್ಮಯಿ ಅವರು ಮುಖ್ಯಮಂತ್ರಿ ಆಗಿದ್ದಾಗ ಬಿಜೆಪಿ ಸರ್ಕಾರ 'ಜನವರಿ 21' ಅನ್ನು 'ದಾಸೋಹ ದಿನ'ವಾಗಿ ಘೋಷಿಸಿದ್ದು, ಇಂದಿನ ರಾಜ್ಯ ಸರ್ಕಾರ ಅದನ್ನು ಪಾಲಿಸುವ ಮೂಲಕ ಶ್ರೀಗಳಿಗೆ ಗೌರವ ಸೂಚಿಸಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಇದೇ ವೇಳೆ ಆಗ್ರಹಿಸಿದರು.

<><><>

**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ –ಕೆಎಸ್‌ಆರ್‌ಟಿಸಿ ತನ್ನ ಅತ್ಯುತ್ತಮ** ತರಬೇತಿ ಮತ್ತು ಸಾಂಸ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಪ್ರತಿಷ್ಠಿತ 'ವರ್ಲ್ಡ್ ಎಚ್‌ಆರ್‌ಡಿ ಕಾಂಗ್ರೆಸ್ ಪ್ರಶಸ್ತಿ–2026ಕ್ಕೆ' ಭಾಜನವಾಗಿದೆ. ಕೊಚ್ಚಿನ್‌ನಲ್ಲಿ ನಡೆದ ಸಮಾರಂಭದಲ್ಲಿ ಈ ಗೌರವವನ್ನು ಪ್ರದಾನ ಮಾಡಲಾಯಿತು. ನಿಗಮದ ಅಭಿವೃದ್ಧಿಯಲ್ಲಿ ತರಬೇತಿ ಕಾರ್ಯಕ್ರಮಗಳ ಪರಿಣಾಮಕಾರಿ ಪಾತ್ರವನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕಳೆದ ಆರು ತಿಂಗಳಲ್ಲಿ ನಿಗಮದ 5 ತರಬೇತಿ ಕೇಂದ್ರಗಳ ಮೂಲಕ 12,000ಕ್ಕೂ ಹೆಚ್ಚು ಸಿಬ್ಬಂದಿಗಳಿಗೆ ವಿವಿಧ ಮಾದರಿಯ ತರಬೇತಿ ನೀಡಲಾಗಿದೆ. ಇಂಧನ ಕ್ಷಮತೆ, ಅಪಘಾತ ರಹಿತ ಚಾಲನೆ, ರಸ್ತೆ ಸುರಕ್ಷತೆ, ಸಿಮ್ಯುಲೇಟರ್ ತರಬೇತಿ ಹಾಗೂ ಆಡಳಿತ ಮಂಡಳಿ ಸಿಬ್ಬಂದಿಗಳಿಗೆ ಪುನಃಶ್ಚೇತನ ತರಬೇತಿಗಳನ್ನು ಆಯೋಜಿಸಲಾಗಿತ್ತು.

<><><>

**ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಮಕ್ಕಳಲ್ಲಿ ಕಾಣೆಯಾಗುತ್ತಿರುವ ನೈಜ ಚಟುವಟಿಕೆ ಮತ್ತು ಕೌಶಲಗಳನ್ನು ಉಳಿಸಿಕೊಳ್ಳಲು ಕಟ್ಟುನಿಟ್ಟಿನ** ನಿಯಮಗಳನ್ನು ತರುವುದು ಅನಿವಾರ್ಯವಾಗಿದೆ. ಇದಕ್ಕಾಗಿಯೇ ರಾಜ್ಯ ಸರ್ಕಾರ ನಿಮ್ಹಾನ್ಸ್ ಸಂಸ್ಥೆಯ ಜೊತೆಗೂಡಿ, 'ಡಿಜಿಟಲ್ ಕರಡು ನೀತಿ'ಯನ್ನು ಸಿದ್ಧಪಡಿಸಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ರಾಜ್ಯದ ವಿದ್ಯಾರ್ಥಿಗಳ ಡಿಜಿಟಲ್ ಆರೋಗ್ಯ ಮತ್ತು ಸುರಕ್ಷತೆಗೆ ಸಂಬಂಧಿಸಿದಂತೆ ನಿಯಮ ರೂಪಿಸುವ ಕುರಿತು ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಅವರು, ಇದು ಕೇವಲ ಸರ್ಕಾರದ ನಿರ್ಧಾರವಾಗಬಾರದು, ಇದರಲ್ಲಿ ಸಾರ್ವಜನಿಕರ ಧ್ವನಿಯೂ ಇರಬೇಕು; ಈ ಕರಡು ನೀತಿಯ ಬಗ್ಗೆ ನಿಮ್ಮ ಅಭಿಪ್ರಾಯ, ಪೋ  'ಕರಾಗಿ, ವಿದ್ಯಾರ್ಥಿಗಳಾಗಿ ಅಥವಾ ನಾಗರಿಕರಾಗಿ ನಿಮ್ಮ ಅನಿಸಿಕೆ, ಸಲಹೆಗಳನ್ನು dd6mhkar@gmail.com ಅಥವಾ ddehospital-hfws@karnataka.gov.in ಗೆ ಇಮೇಲ್ ಮಾಡಬಹುದು. ಈ ಕರಡು ಪ್ರತಿ ಆರೋಗ್ಯ ಇಲಾಖೆಯ ವೆಬ್‌ಸೈಟ್‌ನಲ್ಲೂ ಲಭ್ಯವಿದೆ ಎಂದು ಹೇಳಿದರು. ನಮ್ಮ ಮಕ್ಕಳನ್ನು ಡಿಜಿಟಲ್ ವ್ಯಸನದಿಂದ ಹೊರತಂದು ಅವರ ಬದುಕನ್ನು ಬಂಗಾರ ಮಾಡಲು ಕೈಜೋಡಿಸೋಣ ಎಂದು ಅವರು ಕರೆ ನೀಡಿದರು.

<><><>

**ಸಚಿವ ದಿನೇಶ ಗುಂಡೂರಾವ ಧ್ವನಿ 47 ಸೆಕೆಂದುಗಳು**

<><><>

**ಇಂದು ಹನುಮ ಜಯಂತಿ. ಹನುಮ ಜಯಂತಿಯು ಭಗವಾನ್** ಹನುಮಂತನ ಜನ್ಮದಿನವನ್ನು ಆಚರಿಸುವ ಹಬ್ಬವಾಗಿದೆ. ಇದು ಶಕ್ತಿ, ಭಕ್ತಿ, ವಿನಯ ಮತ್ತು ನಿಸ್ವಾರ್ಥ ಸೇವೆಯ ಸಂಕೇತವಾಗಿದೆ. ಇದನ್ನು ಮಾರ್ಗಶಿರ ಮಾಸದ ಶುಕ್ಲ ಪಕ್ಷದ ತ್ರಯೋದಶಿಯಂದು ಆಚರಿಸಲಾಗುತ್ತದೆ. ಭಕ್ತರು ಆಂಜನೇಯನ ಆಶೀರ್ವಾದಕ್ಕಾಗಿ ವಿಶೇ ಪೂಜೆ, ಉಪವಾಸ ಮತ್ತು ಹನುಮಾನ್ ಚಾಲೀಸಾ ಪಠಿಸುತ್ತಾರೆ. ಹನುಮಂತನನ್ನು ಶಕ್ತಿಯ ದೇವತೆ ಎಂದು ಪೂಜಿಸಲಾಗುತ್ತದೆ. ರಾಮನ ಪರಮ ಭಕ್ತನಾದ ಹನುಮಂತನ ಭಕ್ತಿ ಮತ್ತು ಸಮರ್ಪಣಾ ಮನೋಭಾವವನ್ನು ಈ ದಿನ ಸ್ಮರಿಸಲಾಗುತ್ತದೆ.

**<><><>**

**ಇಂದು ಪೊಲೀಸ್ ಧ್ವಜ ದಿನಾಚರಣೆ. ಕರ್ನಾಟಕದಲ್ಲಿ ಪೊಲೀಸ್** ಧ್ವಜ ದಿನಾಚರಣೆಯನ್ನು ಪ್ರತಿ ವ ರ್ ಏಪ್ರಿಲ್ 2 ರಂದು ಆಚರಿಸಲಾಗುತ್ತದೆ. 1965 ರಲ್ಲಿ ಇದೇ ದಿನದಂದು ಕರ್ನಾಟಕ ಪೊಲೀಸ್ ಪಡೆ ರಚನೆಯಾದ ನೆನಪಿಗಾಗಿ ಮತ್ತು ಪೊಲೀಸರ ಸೇವೆ, ಶೌರ್ಯ ಹಾಗೂ ತ್ಯಾಗವನ್ನು ಗೌರವಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಈ ದಿನದಂದು ರಾಜ್ಯಾದ್ಯಂತ ಪೊಲೀಸ್ ಇಲಾಖೆಯು ವಿವಿಧ ಕಾರ್ಯಕ್ರಮಗಳು ಮತ್ತು ಕವಾಯತು (ಪರೇಡ್)ಗಳನ್ನು ಆಯೋಜಿಸುತ್ತದೆ. **ಪೊಲೀಸ್ ಧ್ವಜ ದಿನದ ಅಂಗವಾಗಿ** ಪೊಲೀಸ್ ಕಲ್ಯಾಣ ನಿಧಿಗೆ ದೇಣಿಗೆ ಸಂಗ್ರಹಿಸಲಾಗುತ್ತದೆ, ಇದು ನಿವೃತ್ತ ಮತ್ತು ಸೇವೆಯಲ್ಲಿರುವ ಸಿಬ್ಬಂದಿಗಳ ಕುಟುಂಬಗಳಿಗೆ ಸಹಾಯ ಮಾಡುತ್ತದೆ.ದಕ್ಷತೆಯಿಂದ ಕಾರ್ಯನಿರ್ವಹಿಸಿದ ಪೊಲೀಸ್ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳ ಪದಕಗಳನ್ನು ಈ ಸಂದರ್ಭದಲ್ಲಿ ಪ್ರದಾನ ಮಾಡಲಾಗುತ್ತದೆ. ಇಂದು ಬೆಳಿಗ್ಗೆ 8.00 ಗಂಟೆಗೆ ಬೆಂಗಳೂರಿನ ಕೋರಮಂಗಲದ ಕೆ.ಎಸ್.ಆರ್.ಪಿ. ಪರೇಡ್ ಮೈದಾನದಲ್ಲಿ ಮುಖ್ಯ ಕಾರ್ಯಕ್ರಮ ಆಯೋಜಿಸಲಾಗಿದೆ.ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಲಿದ್ದು, ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

<><><>.

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಮುಂದುವರಿದ ಪ್ರಚಾರ.**

- ಆಹಾರ, ಜ್ಞಾನ ಮತ್ತು ಮೌಲ್ಯಗಳನ್ನು ನೀಡುವ ಮೂಲಕ ಆಧ್ಯಾತ್ಮಿಕ ಸಾಧನೆ ಮಾಡಿದವರು ಡಾ.ಶ್ರೀ.ಶಿವಕುಮಾರ ಸ್ವಾಮೀಜಿ – ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್.

- ಮಕ್ಕಳಲ್ಲಿ ಕಾಣೆಯಾಗುತ್ತಿರುವ ನೈಜ ಚಟುವಟಿಕೆ ಮತ್ತು ಕೌಶಲಗಳನ್ನು ಉಳಿಸಿಕೊಳ್ಳಲು ಸರ್ಕಾರದಿಂದ 'ಡಿಜಿಟಲ್ ಕರಡು ನೀತಿ'.

- ಇಂದು ಹನುಮ ಜಯಂತಿ ಹಾಗೂ ಪೊಲೀಸ್ ಧ್ವಜ ದಿನಾಚರಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

****END****